# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರವನ್ನು ಪಾವತಿಸಲು ಜಿಲ್ಲಾಧಿಕಾರಿಗಳಿಗೆ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ (SDRF) ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕಂಇ 214 ಟಿಎನ್‌ಆರ್ 2024, ದಿನಾಂಕ: 16.08.2024.
2. ಸರ್ಕಾರದ ಆದೇಶ ಸಂಖ್ಯೆ: ಆಇ 247 ಬಿಆರ್‌ಎಸ್ 2024, ದಿನಾಂಕ: 11.11.2024.
3. ಸರ್ಕಾರದ ಇದೇ ಸಮ ಸಂಖ್ಯೆಯ ಆದೇಶ ದಿನಾಂಕ: 13.11.2024.
4. ಜಿಲ್ಲಾಧಿಕಾರಿ, ಧಾರವಾಡ ಜಿಲ್ಲೆ ರವರ ಏಕ ಕಡತ ಸಂಖ್ಯೆ: DCDH-CAL0CAL/41/2024 (1590242).
5. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರ ಏಕ ಕಡತ ಸಂಖ್ಯೆ: CKSDMA-DMA0ETC/20/2024 (1590145).

*****

**ಪ್ರಸ್ತಾವನೆ:**

2024-25ನೇ ಸಾಲಿನಲ್ಲಿ ನೈಸರ್ಗಿಕ ವಿಕೋಪಗಳಿಂದ ಸ್ಥಳೀಯವಾಗಿ ಉಂಟಾಗುವ ಬೆಳೆ ಹಾನಿಗೆ ಕೇಂದ್ರ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ: 11.07.2023 ರಂದು ಹೊರಡಿಸಿರುವ Revised Items of Expenditure and Norms of assistance from the State Disaster Response Fund (SDRF) ರ ಮಾರ್ಗಸೂಚಿಗಳನ್ವಯ ನಿಯಮಾನುಸಾರ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ ಪಾವತಿಸಬಹುದಾದ ಪರಿಹಾರ ಮೊತ್ತವನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳ ಹಂತದಲ್ಲಿಯೇ ಪರಿಹಾರ ತಂತ್ರಾಂಶದ ಮುಖಾಂತರ ಮಾತ್ರವೇ ನಿಯಮಾನುಸಾರ ಅರ್ಹ ರೈತ ಫಲಾನುಭವಿಗಳಿಗೆ ಅರ್ಹತೆಗನುಗುಣವಾಗಿ ಪಾವತಿಸಲು, ಕಾರ್ಯವಿಧಾನ ಹಾಗೂ ಷರತ್ತು / ನಿಬಂಧನೆಗಳನ್ನು ಮೇಲೆ ಓದಲಾದ (1) ರ ಆದೇಶದಲ್ಲಿ ನಿಗದಿಪಡಿಸಲಾಗಿದೆ.

ರಾಜ್ಯ ವಿಪತ್ತು ಪರಿಹಾರ ನಿಧಿಯ ಲೆಕ್ಕ ಶೀರ್ಷಿಕೆಯಾದ 2245-80-102-0-01-059 ಗೆ, ಲೆಕ್ಕ ಶೀರ್ಷಿಕೆಯಾದ 2245-80-102-0-01-051 ರಿಂದ ರೂ.5000.00 ಲಕ್ಷಗಳನ್ನು ಹಾಗೂ ಲೆಕ್ಕ ಶೀರ್ಷಿಕೆಯಾದ 2245-80-102-0-01-140 ರಿಂದ ರೂ.5000.00 ಲಕ್ಷಗಳನ್ನು ಮೇಲೆ ಓದಲಾದ (2) ರ ಸರ್ಕಾರಿ ಆದೇಶದಲ್ಲಿ ಪುನರ್ ವಿನಿಯೋಗ ಮಾಡಲಾಗಿರುತ್ತದೆ.

.....2

2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರವನ್ನು ಜಿಲ್ಲಾಧಿಕಾರಿರವರ ಹಂತದಲ್ಲಿಯೇ ಮೇಲೆ ಓದಲಾದ (1) ರ ಆದೇಶದಲ್ಲಿ ವಿಧಿಸಿರುವ ಷರತ್ತುಗಳ ಪಾಲನೆಗೆ ಒಳಪಟ್ಟು, ಅರ್ಹತೆಯಂತೆ ನಿಯಮಾನುಸಾರ ಬೆಳೆಹಾನಿ ಪರಿಹಾರ ಮೊತ್ತವನ್ನು ಪಾವತಿಸಲು ಅನುವಾಗುವಂತೆ, ಬೆಳಗಾವಿ, ಬಾಗಲಕೋಟೆ ಮತ್ತು ಬೀದರ್ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಗೆ, ರಾಜ್ಯ ವಿಪತ್ತು ಪರಿಹಾರಿ ನಿಧಿ ಲೆಕ್ಕ ಶೀರ್ಷಿಕೆ 2245-80-102-0-01-059 ರಿಂದ ಕೆಳಕಂಡಂತೆ ಅನುದಾನವನ್ನು ಮೇಲೆ ಓದಲಾದ (3) ರ ಆದೇಶದಲ್ಲಿ ಬಿಡುಗಡೆಗೊಳಿಸಲಾಗಿದೆ.

| **ಕ್ರ. ಸಂ.** | **ಜಿಲ್ಲೆಯ ಹೆಸರು** | **ಬಿಡುಗಡೆ ಮಾಡಿರುವ ಅನುದಾನದ ಮೊತ್ತ (ರೂ.ಕೋಟಿಗಳಲ್ಲಿ)** |
|---|---|---|
| 1 | ಬೆಳಗಾವಿ | 10.00 |
| 2 | ಬಾಗಲಕೋಟೆ | 15.00 |
| 3 | ಬೀದರ್ | 10.00 |
| | **ಒಟ್ಟು** | **35.00** |

ಧಾರವಾಡ ಜಿಲ್ಲೆಯಲ್ಲಿ 2024-25 ನೇ ಸಾಲಿನ ಅಕ್ಟೋಬರ್ ಮಾಹೆಯಲ್ಲಿ ಅತಿವೃಷ್ಟಿಯಿಂದ ಒಟ್ಟು 68,727.32 ಹೆಕ್ಟೇರ್ ಬೆಳೆ ಹಾನಿ ಉಂಟಾಗಿದ್ದು ಬೆಳೆ ಹಾನಿಗೆ ಇನ್ಪುಟ್ ಸಬ್ಸಿಡಿ ಪಾವತಿಸಲು ರೂ. 6090.46 ಲಕ್ಷಗಳು ಅಗತ್ಯವಿರುವುದರಿಂದ, ಪಕೃತಿ ವಿಕೋಪ ಪಿ.ಡಿ. ಖಾತೆಗೆ ರೂ.7000.00 ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಜಿಲ್ಲಾಧಿಕಾರಿ, ಧಾರವಾಡ ರವರು ಮೇಲೆ ಓದಲಾದ (4) ರ ಏಕ ಕಡತದಲ್ಲಿ ಕೋರಿರುತ್ತಾರೆ.

ರಾಜ್ಯದಲ್ಲಿ ಜಿಲ್ಲಾವಾರು ಬೆಳೆ ಹಾನಿಯಾಗಿರುವ ಕುರಿತು ಅಂಕಿ-ಅಂಶಗಳನ್ನು ಪರಿಶೀಲಿಸಿ, ಅರ್ಹ ರೈತರಿಗೆ ಬೆಳೆ ಹಾನಿ ಪರಿಹಾರವನ್ನು ನಿಯಮಾನುಸಾರ ಪಾವತಿಸಲು ಅನುವಾಗುವಂತೆ ಬೆಳಗಾವಿ ಜಿಲ್ಲೆಗೆ ರೂ.23.00 ಕೋಟಿ (ರೂ. 13 ಕೋಟಿ ಮುಂಗಾರು ಅವಧಿಯ ಬೆಳೆ ಹಾನಿಗೆ ಹಾಗೂ ರೂ.10 ಕೋಟಿ ಹಿಂಗಾರು ಅವಧಿಯ ಬೆಳೆ ಹಾನಿಗೆ), ಬಾಗಲಕೋಟೆ ಜಿಲ್ಲೆಗೆ ಹಿಂಗಾರು ಅವಧಿಯ ಬೆಳೆ ಹಾನಿಗೆ ರೂ.5.00 ಕೋಟಿ, ಹಾವೇರಿ ಜಿಲ್ಲೆಗೆ ಹಿಂಗಾರು ಅವಧಿಯ ಬೆಳೆ ಹಾನಿಗೆ ರೂ.50.00 ಕೋಟಿ, ಧಾರವಾಡ ಜಿಲ್ಲೆಗೆ ಹಿಂಗಾರು ಅವಧಿಯ ಬೆಳೆ ಹಾನಿಗೆ ರೂ.55.00 ಕೋಟಿ ಮತ್ತು ಚಿಕ್ಕಮಗಳೂರು ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಯಲ್ಲಿ ಕಡಿಮೆ ಮೊತ್ತ ಇರುವುದರಿಂದ ಕ್ರಮವಾಗಿ ರೂ.5.00 ಕೋಟಿ ಮತ್ತು ರೂ.3.00 ಕೋಟಿಗಳನ್ನು ಸೇರಿ ಒಟ್ಟಾರೆ ರೂ.141.00 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಬಹುದಾಗಿದೆ ಎಂದು ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರು ಮೇಲೆ ಓದಲಾದ (5) ರ ಏಕ ಕಡತದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತುತ ರಾಜ್ಯ ವಿಪತ್ತು ಪರಿಹಾರ ನಿಧಿಯ ಲೆಕ್ಕ ಶೀರ್ಷಿಕೆ: 2245-80-102-0-01-059 ರಡಿ ಒಟ್ಟು ರೂ.65.00 ಕೋಟಿಗಳ ಅನುದಾನವು ಲಭ್ಯವಿರುವುದರಿಂದ ಜಿಲ್ಲಾಧಿಕಾರಿ, ಧಾರವಾಡ ಜಿಲ್ಲೆ ರವರ ಪ್ರಸ್ತಾವನೆ ಹಾಗೂ ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರ ಶಿಫಾರಸ್ಸನ್ನು ಕೂಲಂಕಷವಾಗಿ ಪರಿಶೀಲಿಸಿ, 2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರವನ್ನು ಜಿಲ್ಲಾಧಿಕಾರಿರವರ ಹಂತದಲ್ಲಿಯೇ ಪಿ.ಡಿ. ಖಾತೆಯಿಂದ ದಿನಾಂಕ: 16.08.2024 ರ ಸರ್ಕಾರದ ಆದೇಶದಂತೆ ಪಾವತಿಸಲು ಅನುವಾಗುವಂತೆ, ಬೆಳಗಾವಿ, ಧಾರವಾಡ ಮತ್ತು ಬಾಗಲಕೋಟೆ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಗೆ ಹಾಗೂ ದಕ್ಷಿಣ ಕನ್ನಡ ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಯಲ್ಲಿ ಕಡಿಮೆ ಮೊತ್ತ ಇರುವುದರಿಂದ ಮುಂದಿನ ದಿನಗಳಲ್ಲಿ ನೈಸರ್ಗಿಕ ವಿಕೋಪದಿಂದ ಉಂಟಾಗಬಹುದಾದ ವಿಪತ್ತುಗಳನ್ನು ಪರಿಣಾಮಕಾರಿಯಾಗಿ ನಿಭಾಯಿಸಲು ಅನುವಾಗುವಂತೆ, ಸದರಿಯವರ ಪಿ.ಡಿ ಖಾತೆಗೆ ರಾಜ್ಯ ವಿಪತ್ತು ಪರಿಹಾರಿ ನಿಧಿ ಲೆಕ್ಕ ಶೀರ್ಷಿಕೆ: 2245-80-102-0-01-059 ರಿಂದ ಅವಶ್ಯಕ ಅನುದಾವನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿ, ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಕಂಇ 256 ಟಿಎನ್ಆರ್ 2024,</u>**
**<u>ಬೆಂಗಳೂರು; ದಿನಾಂಕ:26.11.2024.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರವನ್ನು ಜಿಲ್ಲಾಧಿಕಾರಿರವರ ಹಂತದಲ್ಲಿಯೇ ದಿನಾಂಕ: 16.08.2024 ರ ಸರ್ಕಾರದ ಆದೇಶ ಸಂಖ್ಯೆ: ಕಂಇ 214 ಟಿಎನ್ಆರ್ 2024 ರಲ್ಲಿ ವಿಧಿಸಿರುವ ಷರತ್ತುಗಳ ಪಾಲನೆಗೆ ಒಳಪಟ್ಟು, ಅರ್ಹತೆಯಂತೆ ನಿಯಮಾನುಸಾರ ಬೆಳೆಹಾನಿ ಪರಿಹಾರ ಮೊತ್ತವನ್ನು ಪಾವತಿಸಲು ಅನುವಾಗುವಂತೆ, ಬೆಳಗಾವಿ, ಧಾರವಾಡ, ಹಾಗೂ ಬಾಗಲಕೋಟೆ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಗೆ, ರಾಜ್ಯ ವಿಪತ್ತು ಪರಿಹಾರಿ ನಿಧಿ ಲೆಕ್ಕ ಶೀರ್ಷಿಕೆ: 2245-80-102-0-01-059 ರಿಂದ ಕೆಳಕಂಡಂತೆ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಿದೆ.

| ಕ್ರ. ಸಂ. | ಜಿಲ್ಲೆಯ ಹೆಸರು | ಬಿಡುಗಡೆ ಮಾಡಿರುವ ಅನುದಾನದ ಮೊತ್ತ (ರೂ.ಕೋಟಿಗಳಲ್ಲಿ) |
|---|---|---|
| 1 | ಬೆಳಗಾವಿ | 23.00 |
| 2 | ಧಾರವಾಡ | 36.00 |
| 3 | ಬಾಗಲಕೋಟೆ | 05.00 |
| | **ಒಟ್ಟು** | **64.00** |

ದಕ್ಷಿಣ ಕನ್ನಡ ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಯಲ್ಲಿ ಪ್ರಸ್ತುತ ಕಡಿಮೆ ಮೊತ್ತ ಇರುವುದರಿಂದ ಮುಂದಿನ ದಿನಗಳಲ್ಲಿ ನೈಸರ್ಗಿಕ ವಿಕೋಪದಿಂದ ಉಂಟಾಗಬಹುದಾದ ವಿಪತ್ತುಗಳನ್ನು ಪರಿಣಾಮಕಾರಿಯಾಗಿ ನಿಭಾಯಿಸಲು

.....4

ಅನುವಾಗುವಂತೆ, ಸದರಿಯವರ ಪಿ.ಡಿ ಖಾತೆಗೆ ರೂ.1.00 ಕೋಟಿಯನ್ನು ರಾಜ್ಯ ವಿಪತ್ತು ಪರಿಹಾರಿ ನಿಧಿ ಲೆಕ್ಕ ಶೀರ್ಷಿಕೆ: 2245-80-102-0-01-059 ರಿಂದ ಬಿಡುಗಡೆಗೊಳಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 635/ವೆಚ್ಚ-7/2024, ದಿನಾಂಕ: 12.11.2024 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್.ಆರ್. ಶಿವಶಂಕರ್)**
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ,
(ವಿಪತ್ತು ನಿರ್ವಹಣೆ ಹಾಗೂ ನೋಂ & ಮು)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (A&E) ಹಾಗೂ (E & RSA), ಕರ್ನಾಟಕ, ಪಿ.ಬಿ.ನಂ. 5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ, ಪಿ.ಬಿ.ನಂ. 5398, ಪಾರ್ಕ್ ಹೌಸ್ ರೋಡ್, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬೆಂಗಳೂರು.
5. ಜಿಲ್ಲಾಧಿಕಾರಿಗಳು - ಬೆಳಗಾವಿ, ಧಾರವಾಡ, ಬಾಗಲಕೋಟೆ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ
6. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, ಕೆ.ಪಿ.ಸಿ.ಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
7. ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7 & 8), ವಿಧಾನ ಸೌಧ, ಬೆಂಗಳೂರು.

**ಪ್ರತಿ:**

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿರವರುಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
5. ಲೆಕ್ಕ ಪತ್ರ ಶಾಖೆ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ).
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.